# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:** | 808(859) |
| **ಮಾನ್ಯ ಸದಸ್ಯರ ಹೆಸರು** | ಶ್ರೀ ಸಿ.ಎನ್. ಮಂಜೇಗೌಡ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| **ಉತ್ತರಿಸುವ ಸಚಿವರು** | ಉನ್ನತ ಶಿಕ್ಷಣ ಸಚಿವರು |
| **ಉತ್ತರಿಸಬೇಕಾದ ದಿನಾಂಕ** | 15.12.2025 |

| | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮೈಸೂರು ಇಲ್ಲಿ ವರ್ಕ್‌ಲೋಡ್ ಇಲ್ಲದಿದ್ದರೂ ಸಾವಿರಕ್ಕೂ ಮೀರಿ ನಿಯಮ ಬಾಹಿರವಾಗಿ ತಾತ್ಕಾಲಿಕ ಸಿಬ್ಬಂದಿ ನೇಮಕಾತಿ ಆಗಿರುವುದು ನಿಜವೇ: ವರ್ಗಾವಣೆಗಳಲ್ಲಿನ ಭ್ರಷ್ಟಾಚಾರ ಹಾಗೂ ದುಂದುವೆಚ್ಚ ಇತ್ಯಾದಿಗಳ ಬಗ್ಗೆ ವಿಚಾರಣೆ ನಡೆಸಲು ಉನ್ನತ ಶಿಕ್ಷಣ ಪರಿಷತ್ತಿನ ಉಪಾಧ್ಯಕ್ಷರನ್ನು ನೇಮಿಸಿದ್ದು ದಿನಾಂಕ: 21.05.2025ರಂದು ವಿಚಾರಣಾ ವರದಿ ಸಲ್ಲಿಕೆಯಾಗಿದೆಯೇ; (ವರದಿ ಪ್ರತಿ ಒದಗಿಸುವುದು) | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮೈಸೂರು ಇಲ್ಲಿ ವರ್ಕ್‌ಲೋಡ್ ಇಲ್ಲದಿದ್ದರೂ ಸಾವಿರಕ್ಕೂ ಮೀರಿ ನಿಯಮಬಾಹಿರವಾಗಿ ತಾತ್ಕಾಲಿಕ ಸಿಬ್ಬಂದಿ ನೇಮಕಾತಿ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಅದರನ್ವಯ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯವನ್ನೂ ಒಳಗೊಂಡಂತೆ ರಾಜ್ಯದ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಸರ್ಕಾರದ ಪೂರ್ವಾನುಮೋದನೆ ಇಲ್ಲದೇ ಮಂಜೂರಾದ ಹುದ್ದೆಗಳಿಗೂ ಮೀರಿ ಅಗತ್ಯಕ್ಕಿಂತಲೂ ಹೆಚ್ಚಿನ ಸಂಖ್ಯೆಯಲ್ಲಿ ನೇಮಿಸಿಕೊಂಡ ನೌಕರರನ್ನು ಸೇವೆಯಿಂದ ಬಿಡುಗಡೆಗೊಳಿಸಿ ವಿಶ್ವವಿದ್ಯಾಲಯಗಳ ಸಿಬ್ಬಂದಿಗಳ ಸಂಖ್ಯೆಯನ್ನು ತರ್ಕಬದ್ಧಗೊಳಿಸಲು (Rationalize) ಕ್ರಮವಹಿಸುವಂತೆ ವಿಶ್ವವಿದ್ಯಾಲಯಗಳಿಗೆ ಸೂಚನೆ ನೀಡಲಾಗಿರುತ್ತದೆ.<br><br>ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ವರ್ಗಾವಣೆಗಳಲ್ಲಿನ ಭ್ರಷ್ಟಾಚಾರ ಹಾಗೂ ದುಂದುವೆಚ್ಚ ಇತ್ಯಾದಿಗಳ ಪ್ರಕರಣದ ಬಗ್ಗೆ ಸತ್ಯಾಸತ್ಯಾತೆಯನ್ನು ತಿಳಿಯಲು ವಿಶ್ವವಿದ್ಯಾಲಯಕ್ಕೆ ಖುದ್ದಾಗಿ ಭೇಟಿ ನೀಡಿ ಸಂಬಂಧಿತ ಅಧಿಕಾರಿ/ ಸಿಬ್ಬಂದಿಯೊಂದಿಗೆ ಚರ್ಚಿಸಿ ವಿಸ್ತೃತವಾದ ಮಾಹಿತಿ ಕ್ರೋಢೀಕರಿಸಿ ಪ್ರಾಥಮಿಕ ತನಿಖಾ ವರದಿ/ಪರಿಶೀಲನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲು ಡಾ. ಎನ್ .ಆರ್. ನಿರಂಜನ್, ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು ಇವರಿಗೆ ಸೂಚಿಸಲಾಗಿದ್ದು, ಸದರಿಯವರು ಸರ್ಕಾರಕ್ಕೆ ದಿನಾಂಕ:21.05.2025ರಂದು ತನಿಖಾ ವರದಿಯನ್ನು ಇಲಾಖೆಗೆ ಸಲ್ಲಿಸಿರುತ್ತಾರೆ. |
| ಆ) | ಸದರಿ ವಿಚಾರಣಾ ವರದಿ ಸರ್ಕಾರಕ್ಕೆ ಸಲ್ಲಿಕೆಯಾದ ನಂತರ ವಿ.ವಿ. ಅಧಿನಿಯಮ 1992ರ ಪ್ರಕರಣ 08 ರಡಿ ಪ್ರದತ್ತವಾದ ಅಧಿಕಾರದನ್ವಯ ಘನತೆವೆತ್ತ ರಾಜ್ಯಪಾಲರು ವರದಿಯಲ್ಲಿನ ಅಂಶಗಳ ಕುರಿತು ಪ್ರತ್ಯೇಕವಾಗಿ ನಿವೃತ್ತ ಹೈಕೋರ್ಟ್ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖಾ ಸಮಿತಿ ರಚನೆಯಾಗಿದೆಯೇ; | |
| ಇ) | ಸಮಿತಿ ರಚನೆಯಾಗಿದ್ದರೆ ಸಮಿತಿಯು ತನ್ನ ವರದಿಯನ್ನು ಸಲ್ಲಿಸಿದೆಯೇ? (ಆದೇಶದ ಪ್ರತಿಯನ್ನು ಒದಗಿಸುವುದು) | |

| | | |
|---|---|---|
| | | ಸದರಿ ತನಿಖಾ ವರದಿಯಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಆಡಳಿತಾತ್ಮಕ ಮತ್ತು ಶೈಕ್ಷಣಿಕ ಚಟುವಟಿಕೆಗಳಲ್ಲಿ ಕೆಲವು ಲೋಪ-ದೋಷಗಳು ಕಂಡುಬಂದ ಹಿನ್ನಲೆಯಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಅಧಿನಿಯಮ, 1992 ರ ಪ್ರಕರಣ 8ರಲ್ಲಿ ಪ್ರದತ್ತವಾದ ಅಧಿಕಾರದನ್ವಯ ಘನತೆವೆತ್ತ ರಾಜ್ಯಪಾಲರು ಪ್ರತ್ಯೇಕವಾಗಿ ನಿವೃತ್ತ ಹೈಕೋರ್ಟ್ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖಾ ಸಮಿತಿಯನ್ನು ರಚಿಸಿ ತನಿಖೆಯನ್ನು ಪ್ರಾರಂಭಿಸಲು ಅನುಮೋದನೆ ನೀಡುವಂತೆ ಇಲಾಖೆಯಿಂದ ಘನತೆವೆತ್ತ ಕುಲಾಧಿಪತಿಗಳನ್ನು ಕೋರಲಾಗಿರುತ್ತದೆ. |

**ಸಂಖ್ಯೆ: ಇಡಿ 64 ಯುಒವಿ 2025**

(ಡಾ|| ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು